Akashvani : Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

18.02.2025 19.35 hrs

<><*<><>*><>

## ಮುಖ್ಯಾಂಶಗಳು

- ಭಾರತ - ಕತಾರ್ ನಡುವಿನ ಸಂಬಂಧ ಬಲವರ್ಧನೆಗೆ ಉಭಯ ದೇಶಗಳ ಸಮ್ಮತಿ; ಎರಡು ಮಹತ್ವದ ಒಪ್ಪಂದಗಳಿಗೆ ಅಂಕಿತ
- ರಾಷ್ಟ್ರೀಯ ಭೂ-ಪ್ರಾದೇಶಿಕ ಜ್ಞಾನ ಆಧಾರಿತ ನಗರ ಜನವಸತಿ ಸಮೀಕ್ಷೆ-'ನಕ್ಷಾ' ಯೋಜನೆಗೆ ಚಾಲನೆ; ಭೂದಾಖಲೆಗಳ ಸಂರಕ್ಷಣೆಗೆ ವಿಶೇಷ ಒತ್ತು
- ೨೦೪೭ರ ವೇಳೆಗೆ ಜಲ ಭದ್ರತಾ ರಾಷ್ಟ್ರವಾಗಿ ಭಾರತ ಪರಿವರ್ತನೆ; ಮಳೆ ನೀರು ಕೊಯ್ಲು, ಗ್ರಾಮಗಳ ಬಾವಿಗಳ ಪುನಶ್ಚೇತನಕ್ಕೆ ಕೇಂದ್ರದ ಆದ್ಯತೆ
- ನಾಳೆ ದೆಹಲಿ ಬಿಜೆಪಿ ಶಾಸಕಾಂಗ ಪಕ್ಷದ ಸಭೆ; ನೂತನ ಮುಖ್ಯಮಂತ್ರಿ ಆಯ್ಕೆ ಸಾಧ್ಯತೆ
- ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್; ನಾಳೆ ಉದ್ಘಾಟನಾ ಪಂದ್ಯದಲ್ಲಿ ಪಾಕಿಸ್ತಾನ - ನ್ಯೂಜಿಲೆಂಡ್ ಮುಖಾಮುಖಿ

<><*<><>*><>

ಭಾರತ ಹಾಗೂ ಕತಾರ್ ನಡುವಿನ ವ್ಯೂಹಾತ್ಮಕ ಪಾಲುದಾರಿಕೆಯನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯುವ ಮೂಲಕ ಸಂಬಂಧಗಳ ಬಲವರ್ಧನೆಗೆ ಉಭಯ ದೇಶಗಳು ತೀರ್ಮಾನಿಸಿವೆ. ವ್ಯಾಪಾರ, ಇಂಧನ, ಹೂಡಿಕೆ, ನಾವೀನ್ಯತೆ, ತಂತ್ರಜ್ಞಾನ, ಆಹಾರ ಭದ್ರತೆ, ಸಂಸ್ಕೃತಿ ವಲಯ ಮತ್ತು ಜನರ ನಡುವಿನ ಸಂಬಂಧ ವೃದ್ಧಿಗೆ ಉಭಯ ದೇಶಗಳು ನಿರ್ಧರಿಸಿವೆ. ನವದೆಹಲಿಯಲ್ಲಿಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಕತಾರ್‌ನ ಅಮೀರ್, ಶೇಖ್-ತಮೀಮ್-ಬಿನ್-ಹಮದ್-ಅಲ್-ಥಾನಿ, ನಡುವೆ ನಡೆದ ನಿಯೋಗಮಟ್ಟದ ಮಾತುಕತೆ ಸಂದರ್ಭದಲ್ಲಿ ಉಭಯ ನಾಯಕರು, ಪ್ರಾದೇಶಿಕ ಹಾಗೂ ಜಾಗತಿಕ ಮಟ್ಟದಲ್ಲಿ ಪರಸ್ಪರ ಹಿತಾಸಕ್ತಿ ಕಾಯ್ದುಕೊಳ್ಳುವ ಸಂಬಂಧ ವಿಚಾರ ವಿನಿಮಯ ನಡೆಸಿದರು. ಉಭಯ ದೇಶಗಳು, ಎರಡು ಒಡಂಬಡಿಕೆಗಳಿಗೆ ಸಹಿ ಹಾಕಿದವು. ಈ ಪೈಕಿ ಉಭಯ ದೇಶಗಳ ನಡುವೆ ವ್ಯೂಹಾತ್ಮಕ ಪಾಲುದಾರಿಕೆ ಬಲವರ್ಧನೆ ಮಾಡುವುದು ಹಾಗೂ ದ್ವಿಗುಣ ತೆರಿಗೆ ವ್ಯವಸ್ಥೆ ತಪ್ಪಿಸುವುದು ಮತ್ತು ಆದಾಯದ ಮೇಲಿನ ತೆರಿಗೆಗಳ ಸೋರಿಕೆ ತಡೆಗಟ್ಟುವ ಒಪ್ಪಂದಗಳು ಸೇರಿವೆ. ನಿಯೋಗಮಟ್ಟದ ಮಾತುಕತೆಯ ನಂತರ ಪ್ರಧಾನಿ ನರೇಂದ್ರ ಮೋದಿ ಹಾಗೂ ಕತಾರ್‌ನ ಅಮೀರ್, ಶೇಖ್-ತಮೀಮ್-ಬಿನ್-ಹಮದ್-ಅಲ್-ಥಾನಿ ಸಮ್ಮುಖದಲ್ಲಿ ಒಡಂಬಡಿಕೆಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು. ಭಾರತದ ಪರವಾಗಿ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ಹಣಕಾಸು ಖಾತೆ ಸಚಿವೆ ನಿರ್ಮಲಾ ಸೀತಾರಾಮನ್, ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ಸಚಿವ ಪಿಯೂಷ್ ಗೋಯಲ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಕತಾರ್‌ನ ಸಚಿವರು ಹಾಗೂ ಹಿರಿಯ ಅಧಿಕಾರಿಗಳನ್ನೊಳಗೊಂಡ ಉನ್ನತಮಟ್ಟದ ನಿಯೋಗ, ಮಾತುಕತೆಯಲ್ಲಿ ಪಾಲ್ಗೊಂಡಿತ್ತು. ಇದಕ್ಕೂ ಮುನ್ನ ಇಂದು ಬೆಳಗ್ಗೆ ರಾಷ್ಟ್ರಪತಿ ಭವನದಲ್ಲಿ ಕತಾರ್‌ನ ಅಮೀರ್ ಅವರಿಗೆ ಸಾಂಪ್ರದಾಯಿಕ ಸ್ವಾಗತ ಕೋರಲಾಯಿತು. ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ, ಕೇಂದ್ರದ ಹಲವು ಸಚಿವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಈ ಮಧ್ಯೆ, ಕತಾರ್ ಅಮಿರ್ ಅವರ

ಭಾರತ ಭೇಟಿಯ ಸಂದರ್ಭದಲ್ಲಿ ಉಭಯ ದೇಶಗಳ ನಡುವೆ ವ್ಯಾಪಾರ ಮತ್ತು ಹೂಡಿಕೆ ಸಹಕಾರ ಕುರಿತ ಎರಡು ಒಡಂಬಡಿಕೆಗಳಿಗೆ ಅಂಕಿತ ಹಾಕಲಾಯಿತು. ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯುಷ್ ಗೋಯಲ್ ಹಾಗೂ ಅವರ ಕತಾರ್ ಸಹವರ್ತಿ ಶೇಖ್ ಫೈಸಲ್ ಬಿನ್ ಥಾನಿ ಬಿನ್ ಫೈಸಲ್ ಅಲ್ ಥಾನಿ ಅವರ ಸಮ್ಮುಖದಲ್ಲಿ ಒಪ್ಪಂದಗಳಿಗೆ ಸಹಿ ಹಾಕಲಾಯಿತು.

ಕತಾರಿ ವಾಣಿಜ್ಯೋದ್ಯಮಿಗಳ ಸಂಘಟನೆ ಹಾಗೂ ಭಾರತೀಯ ಕೈಗಾರಿಕಾ ಒಕ್ಕೂಟ-ಸಿಐಐ, ಸಂಘಟನೆಗಳು ಒಪ್ಪಂದಗಳನ್ನು ಪರಸ್ಪರ ವಿನಿಮಯ ಮಾಡಿಕೊಂಡವು. ಇನ್ವೆಸ್ಟ್ ಕತಾರ್ ಮತ್ತು ಇನ್ವೆಸ್ಟ್ ಇಂಡಿಯಾ ಭಾಗವಾಗಿ ಈ ಒಪ್ಪಂದಗಳಿಗೆ ಸಹಿ ಹಾಕಲಾಗಿದೆ. ಭಾರತ-ಕತಾರ್, ವಾಣಿಜ್ಯ ವೇದಿಕೆಯನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಸಚಿವ ಪಿಯುಷ್ ಗೋಯಲ್, ಸುಸ್ಥಿರತೆ, ತಂತ್ರಜ್ಞಾನ, ವಾಣಿಜ್ಯೋದ್ಯಮ ಮತ್ತು ಇಂಧನ ಕ್ಷೇತ್ರಗಳನ್ನು ಆಧರಿಸಿ ಭಾರತ, ಕತಾರ್‌ನ ಭವಿಷ್ಯದ ಪಾಲುದಾರಿಕೆ ನಿರ್ಧರಿಸಲಿದೆ ಎಂದರು.

<><*<><>*><>

ಸಮಾಜದಲ್ಲಿನ ಪ್ರತಿಯೊಂದು ವರ್ಗದ ಹಿತರಕ್ಷಣೆಗೆ ಕೇಂದ್ರ ಸರ್ಕಾರ, ಶ್ರಮಿಸುತ್ತಿದ್ದು, ಆ ಮೂಲಕ ನಾಗರಿಕರ ಬದುಕಿನಲ್ಲಿ ದೊಡ್ಡ ಬದಲಾವಣೆ ತರಲು ಮುಂದಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಮಧ್ಯಪ್ರದೇಶದ ರೈಸನ್‌ನಲ್ಲಿ ಇಂದು ಏರ್ಪಡಿಸಿದ್ದ ರಾಷ್ಟ್ರೀಯ ಭೂ-ಪ್ರಾದೇಶಿಕ ಜ್ಞಾನ ಆಧಾರಿತ ನಗರ ಜನವಸತಿ ಸಮೀಕ್ಷೆ-'ನಕ್ಷಾ'ದ ಪ್ರಾಯೋಗಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ನಂತರ ಅವರು, ಸಭಿಕರನ್ನುದ್ದೇಶಿಸಿ ಮಾತನಾಡಿದರು. ನಕ್ಷಾ ಕಾರ್ಯಕ್ರಮದಿಂದ, ರೈತರ ಆಸ್ತಿಗೆ ಸಂಬಂಧಿಸಿದ ನಕ್ಷೆ ತಯಾರಲಾಗಲಿದೆ ಮತ್ತು ಆಸ್ತಿಗೆ ಸಂಬಂಧಿಸಿದ ದಾಖಲೆಗಳಲ್ಲಿನ ಲೋಪದೋಷಗಳನ್ನು ಸರಿಪಡಿಸಲು ಸಹಕಾರಿಯಾಗಲಿದೆ ಎಂದು ಕೇಂದ್ರ ಸಚಿವರು ತಿಳಿಸಿದರು. ಮಧ್ಯಪ್ರದೇಶದ ಮುಖ್ಯಮಂತ್ರಿ ಡಾ.ಮೋಹನ್ ಯಾದವ್ ಮಾತನಾಡಿ, ನಕ್ಷಾ ಪ್ರಾಯೋಗಿಕ ಕಾರ್ಯಕ್ರಮದ ಅಡಿಯಲ್ಲಿ ಭೂದಾಖಲೆಗಳನ್ನು ಸರಿಪಡಿಸಲಾಗುವುದು ಎಂದು ಹೇಳಿದರು. ಅಭಿವೃದ್ಧಿಯ ವಿಚಾರದಲ್ಲಿ ಸರ್ಕಾರ ಎಲ್ಲಾ ಆಯಾಮಗಳಲ್ಲೂ ಕೆಲಸ ಮಾಡಲಿದೆ ಎಂದು ಭರವಸೆ ನೀಡಿದರು. ಇದೇ ಸಂದರ್ಭದಲ್ಲಿ ಜಲಾನಯನ ಯಾತ್ರೆಗೆ ಚಾಲನೆ ನೀಡಲಾಯಿತು. ನಕ್ಷಾ ಕಾರ್ಯಕ್ರಮದ ಅಡಿಯಲ್ಲಿ ಎಲ್ಲ ಭೂದಾಖಲೆಗಳನ್ನು ಸರಳ ರೀತಿಯಲ್ಲಿ ನಾಗರಿಕರಿಗೆ ದೊರೆಯುವಂತೆ ಮಾಡುವುದು ಮತ್ತು ಡಿಜಿಟಲ್ ಹಾಗೂ ಆಧುನಿಕ ತಂತ್ರಜ್ಞಾನದ ಮೂಲಕ ಅವುಗಳನ್ನು ರಕ್ಷಣೆ ಮಾಡುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಸಂವಹನ ಖಾತೆ ರಾಜ್ಯ ಸಚಿವ ಡಾ.ಚಂದ್ರಶೇಖರ್ ಪೆಮ್ಮಸಾನಿ, ಮಧ್ಯಪ್ರದೇಶ ಸರ್ಕಾರದ ಸಚಿವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಕರ್ನಾಟಕದ ಬೆಳಗಾವಿಯಲ್ಲಿ ನಕ್ಷಾ ಯೋಜನೆಗೆ ಚಾಲನೆ ನೀಡಿದ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ನಗರ ಪ್ರದೇಶದ ಆಸ್ತಿಗಳ ನಿಖರತೆ ತಿಳಿಯಲು ಮತ್ತು ನೋಂದಣಿಯ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ಲಭ್ಯವಾಗುವಂತೆ ಮಾಡುವುದು. ಆ ಮೂಲಕ ವಂಚನೆ, ಬೇನಾಮಿ ವಹಿವಾಟುಗಳನ್ನು ಪರಿಶೀಲಿಸಿ, ಭೂ ವಿವಾದಗಳನ್ನು ಕಡಿಮೆ ಮಾಡುವ ಉದ್ದೇಶದಿಂದ ಕೇಂದ್ರ ಸರ್ಕಾರ ಈ ಯೋಜನೆಯನ್ನು ಪ್ರಾರಂಭಿಸಿದೆ ಎಂದು ಹೇಳಿದರು. ಮೈಸೂರಿನಲ್ಲಿ ನಕ್ಷಾ ಯೋಜನೆಗೆ ಚಾಲನೆ ನೀಡಿದ ಶಾಸಕ ಜಿ.ಟಿ.ದೇವೇಗೌಡ, ಭೂಮಾಲೀಕತ್ವದ ನಿಖರವಾದ ದಾಖಲಾತಿಗಳ ರಚನೆಗೆ ಮತ್ತು ನವೀಕರಣಕ್ಕೆ, ಭೂವಿವಾದಗಳ ಪರಿಹಾರಕ್ಕೆ ಯೋಜನೆ ಸಹಕಾರಿಯಾಗಲಿದೆ ಎಂದರು.

<><*<><>*><>

೨೦೪೭ರ ವೇಳೆಗೆ ಭಾರತವನ್ನು ಜಲಭದ್ರತಾ ರಾಷ್ಟ್ರವನ್ನಾಗಿ ಪರಿವರ್ತಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು, ನೈರ್ಮಲ್ಯ ಕುರಿತು ಒತ್ತು ನೀಡಿದ್ದರ ಫಲವಾಗಿ ದೇಶದಲ್ಲಿ ೧೨ ಕೋಟಿ ಶೌಚಾಲಯಗಳನ್ನು ನಿರ್ಮಿಸಲಾಗಿದ್ದು, ೬೦ ಕೋಟಿ ಜನರಿಗೆ ಉಪಯೋಗವಾಗುತ್ತಿದೆ. ಇದರಿಂದ ನೀರಿನ ಬರುವ ಅತಿಸಾರದಂತಹ ರೋಗಗಳ ಪ್ರಮಾಣ ಕಡಿಮೆಯಾಗಿದೆ ಎಂದು ತಿಳಿಸಿದರು. ರಾಜಸ್ಥಾನದ ಉದಯಪುರದಲ್ಲಿಂದು ಏರ್ಪಡಿಸಿದ್ದ ಎಲ್ಲ ರಾಜ್ಯಗಳ ಜಲಸಂಪನ್ಮೂಲ ಸಚಿವರನ್ನೊಳಗೊಂಡ ಎರಡನೇ ಅಖಿಲ ಭಾರತ ಸಮಾವೇಶ ಉದ್ದೇಶಿಸಿ ಮಾತನಾಡಿದ ಸಚಿವರು, ಮಳೆನೀರು ಕೊಯ್ಲು, ಗ್ರಾಮಗಳಲ್ಲಿನ ಬಾವಿಗಳ ಪುನಶ್ಚೇತನ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಕೈಗೆತ್ತಿಕೊಳ್ಳುವ ಅಗತ್ಯವಿದೆ ಎಂದರು. ಸಮಾವೇಶದಲ್ಲಿ ಪಾಲ್ಗೊಂಡಿದ್ದ ಕರ್ನಾಟಕದ ಜಲಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸರ್ಕಾರ, ಕರ್ನಾಟಕ ರಾಜ್ಯಕ್ಕೆ ಬಾಕಿ ಇರುವ ನೀರಾವರಿ ಯೋಜನೆಗಳಿಗೆ ಅನುಮತಿ ಹಾಗೂ ಅನುದಾನಗಳನ್ನು ನೀಡಬೇಕು ಎಂದು ಮನವಿ ಮಾಡಿದರು.

<><*<><>*><>

ಕೇಂದ್ರ ಗೃಹ ಸಚಿವ ಅಮಿತ್ ಶಾ, ನೇತೃತ್ವದಲ್ಲಿ ನವದೆಹಲಿಯಲ್ಲಿಂದು ಜಮ್ಮು ಮತ್ತು ಕಾಶ್ಮೀರದಲ್ಲಿ ನೂತನ ಕ್ರಿಮಿನಲ್ ಕಾನೂನುಗಳ ಅನುಷ್ಠಾನ ಕುರಿತು ಪರಿಶೀಲನಾ ಸಭೆ ನಡೆಯಿತು. ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಜಮ್ಮು ಮತ್ತು ಕಾಶ್ಮೀರದಲ್ಲಿ ಪೊಲೀಸ್, ಜೈಲುಗಳು, ಕಾನೂನು ಕ್ರಮ ಮತ್ತು ವಿದಿ ವಿಜ್ಞಾನ ಪ್ರಯೋಗಾಲಯಗಳಿಗೆ ಸಂಬಂಧಿಸಿದಂತೆ ಕೇಂದ್ರದ ಕಾನೂನುಗಳ ಅಡಿಯಲ್ಲಿರುವ ವಿವಿಧ ನಿಬಂಧನೆಗಳ ಅನುಷ್ಠಾನದ ಸ್ಥಿತಿಗತಿ ಕುರಿತು ಸಭೆಯಲ್ಲಿ ಪರಾಮರ್ಶೆ ನಡೆಸಲಾಯಿತು.  ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ, ಕೇಂದ್ರದ ನೂತನ ಕಾನೂನುಗಳ ಬಗ್ಗೆ ರಾಜ್ಯದ ಜನರಲ್ಲಿ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಭಾರತೀಯ ನ್ಯಾಯ ಸಂಹಿತೆ, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಮತ್ತು ಭಾರತೀಯ ಸಾಕ್ಷ್ಯ ಅಧಿನಿಯಮ ಸೇರಿದಂತೆ ನೂತನ ಕ್ರಿಮಿನಲ್ ಕಾನೂನುಗಳನ್ನು ಕಳೆದ ವರ್ಷದ ಜುಲೈ ೧ ರಿಂದ ರಾಷ್ಟ್ರಾದ್ಯಂತ ಜಾರಿಗೊಳಿಸಲಾಗಿದೆ. ಈ ಮೂಲಕ ಭಾರತದ ಕಾನೂನು ವ್ಯವಸ್ಥೆಯನ್ನು ಅತ್ಯಂತ ಪಾರದರ್ಶಕ ಹಾಗೂ ಪರಿಣಾಮಕಾರಿಯಾಗಿ ಅಳವಡಿಸಿಕೊಳ್ಳುವುದರ ಮೂಲಕ ಸಮಕಾಲಿನ ಸಮಾಜದ ಅಗತ್ಯಗಳಿಗೆ ಸ್ಪಂದಿಸುವ ಗುರಿ ಹೊಂದಲಾಗಿದೆ.

<><*<><>*><>

ಅಭಿವೃದ್ಧಿಯ ವಿಚಾರದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಒಟ್ಟಾಗಿ ಕಾರ್ಯ ನಿರ್ವಹಿಸುವ ಅಗತ್ಯವಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದ್ದಾರೆ. ಕೇರಳದ ತಿರುವನಂತಪುರಂನಲ್ಲಿ ಇಂದು ಕೇಂದ್ರ ಬಜೆಟ್-೨೦೨೫-೨೬ರ ಕುರಿತು ಏರ್ಪಡಿಸಿದ್ದ ಮಾಹಿತಿ ವಿನಿಮಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಸಚಿವರು, ದೇಶದಲ್ಲಿ ಮಧ್ಯಮ ವರ್ಗದವರ ಅಭಿವೃದ್ಧಿಗೆ ಕೇಂದ್ರ ಬಜೆಟ್ ಹೆಚ್ಚಿನ ಒತ್ತು ನೀಡಿದೆ. ಇದೇ ಸಂದರ್ಭದಲ್ಲಿ ಪ್ರತಿಯೊಬ್ಬರ ಏಳಿಗೆಯನ್ನು ಗಮನದಲ್ಲಿಟ್ಟುಕೊಂಡು ಬಜೆಟ್ ರೂಪಿಸಲಾಗಿದೆ ಎಂದು ತಿಳಿಸಿದರು.

<><*<><>*><>

ನವದೆಹಲಿಯಲ್ಲಿ ನಾಳೆ ದೆಹಲಿ ಬಿಜೆಪಿ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ. ನೂತನವಾಗಿ ಆಯ್ಕೆಯಾಗಿರುವ ಎಲ್ಲ ಬಿಜೆಪಿ ಶಾಸಕರು ಹಾಗೂ ಹಿರಿಯ ನಾಯಕರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ದೆಹಲಿಯ ನೂತನ ಮುಖ್ಯಮಂತ್ರಿ ಆಯ್ಕೆ ವಿಚಾರ ಸಭೆಯಲ್ಲಿ ಅಂತಿಮಗೊಳ್ಳುವ ಸಾಧ್ಯತೆಗಳಿವೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಮುಂದಿನ ಮುಖ್ಯಮಂತ್ರಿಯ ಪ್ರಮಾಣ ವಚನ ಸ್ವೀಕಾರ ಸಮಾರಂಭ ರಾಷ್ಟ್ರ ರಾಜಧಾನಿಯ ರಾಮಲೀಲ ಮೈದಾನದಲ್ಲಿ ಗುರುವಾರ ನಡೆಯುವ ನಿರೀಕ್ಷೆಯಿದೆ. ಒಟ್ಟು ೭೦ ಸದಸ್ಯ ಬಲದ ದೆಹಲಿಯ ವಿಧಾನಸಭೆಗೆ ಇತ್ತೀಚಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿ ೪೮ ಸ್ಥಾನಗಳಲ್ಲಿ ಭರ್ಜರಿ ಗೆಲವು ಸಾಧಿಸಿದೆ.

<><*<><>*><>

ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಪಂದ್ಯಾವಳಿ ನಾಳೆಯಿಂದ ಆರಂಭವಾಗಲಿದೆ. ಪಾಕಿಸ್ತಾನದಲ್ಲಿ ನಡೆಯುವ ಉದ್ಘಾಟನಾ ಪಂದ್ಯದಲ್ಲಿ ಪಾಕಿಸ್ತಾನ ತಂಡವು ನ್ಯೂಜಿಲೆಂಡ್ ತಂಡವನ್ನು ಎದುರಿಸಲಿದೆ. ಹೈಬ್ರಿಡ್ ಮಾದರಿಯಲ್ಲಿ ನಡೆಯಲಿರುವ ಈ ಟೂರ್ನಿಯ ಬಹುತೇಕ ಪಂದ್ಯಗಳು ಪಾಕಿಸ್ತಾನದಲ್ಲಿ ನಡೆಯಲಿದೆ. ಭಾರತ ತಂಡದ ಪಂದ್ಯಗಳಿಗೆ ದುಬೈನ ಅಂತಾರಾಷ್ಟ್ರೀಯ ಕ್ರೀಡಾಂಗಣ ಆತಿಥ್ಯವಹಿಸಲಿದೆ. ಇದೇ ೨೦ ರಂದು ದುಬೈನಲ್ಲಿ ಭಾರತ, ಬಾಂಗ್ಲಾದೇಶವನ್ನು ಎದುರಿಸಲಿದೆ. ೨೩ರಂದು ಭಾರತ-ಪಾಕಿಸ್ತಾನ ನಡುವೆ, ಮಾರ್ಚ್ ೨ರಂದು ಭಾರತ, ನ್ಯೂಜಿಲೆಂಡ್ ಮಧ್ಯೆ ಪಂದ್ಯ ನಡೆಯಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>